ಇ) ಅಂಗವಿಕಲರ ಮಾಶಾಸನ ಆದಾಯದ ಮಿತಿಯನ್ನು ಈ ಕೆಳಗಿನಂತೆ ನಿಗದಿಪಡಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿ ತಿರಸ್ಕರಿಸಲಾಗಿದೆ.

1. ಶೇ.75ಕ್ಕಿಂತ ಹೆಚ್ಚಿನ ಅಂಗವಿಕಲತೆಯುಳ್ಳವರಿಗೆ ಮಾಸಾಶನವನ್ನು ಮಂಜೂರು ಮಾಡಲು ವಾರ್ಷಿಕ ವರಮಾನ ಮಿತಿಯನ್ನು ರೂ.20.000/–ಗಳಿಗೆ ನಿಗದಿಪಡಿಸುವುದು.

2. ಶೇ. 40 ರಿಂದ ಶೇ.75ರೊಳಗಿನ ಅಂಗವಿಕಲತೆಯುಳ್ಳವರಿಗೆ ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳಿಗೆ ನಿಗದಿಪಡಿಸಿರುವ ಆದಾಯಮಿತಿ ಅಂದರೆ, ಗ್ರಾಮೀಣ ಪ್ರದೇಶದಲ್ಲಿ ರೂ.11.500/– ನಗರ ಪ್ರದೇಶದಲ್ಲಿ ರೂ.17.000/–ಗಳಿಗೆ ನಿಗದಿಪಡಿಸುವುದು.

522 ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಆಂಬ್ಯುಲೆನ್ಸ್ ವ್ಯವಸ್ಥೆಯನ್ನು 108ರ ಯೋಜನೆಯಡಿಯಲ್ಲಿ ಖಾಸಗಿಯವರಿಗೆ ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪ್ರತಿ ಕಿ.ಮೀ.ಗೆ ನಿಗದಿಪಡಿಸಿರುವ ದರವೆಷ್ಟು (ಮಾಹಿತಿ ನೀಡುವುದು)?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸಾರ್ವಜನಿಕ ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ಆಂಬ್ಯುಲೆನ್ಸ್ ಸೇವೆಯ ನಿರ್ವಹಣೆಯನ್ನು ಎಮರ್ಜೆನ್ಸಿ ಮ್ಯಾನೇಜ್‌ಮೆಂಟ್ ರಿಸರ್ಚ್ ಇನ್ಸ್‌ಟಿಟ್ಯೂಟ್, (EMRI) ಸಿಕಂದರಾಬಾದ್, ಸಂಸ್ಥೆಗೆ ವಹಿಸಲಾಗಿದೆ.

ಆ) ಒಪ್ಪಂದದ ಪ್ರಕಾರ ಕಿಲೋ ಮೀಟರ್ ಆಧಾರದ ಮೇಲೆ ಈ ಯೋಜನೆ ರೂಪಿಸಿಲ್ಲ.

522 ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಆಂಬ್ಯುಲೆನ್ಸ್ ವ್ಯವಸ್ಥೆಯನ್ನು 108ರ ಯೋಜನೆಯ ಡಿಯಲ್ಲಿ ಖಾಸಗಿಯವರಿಗೆ ವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಪ್ರತಿ ಕಿ.ಮೀ.ಗೆ ನಿಗದಿಪಡಿಸಿರುವ ದರವೆಷ್ಟು (ಮಾಹಿತಿ ನೀಡುವುದು)?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸಾರ್ವಜನಿಕ ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ಆಂಬ್ಯುಲೆನ್ಸ್ ಸೇವೆಯ ನಿರ್ವಹಣೆಯನ್ನು ಎಮರ್ಜೆನ್ಸಿ ಮ್ಯಾನೇಜ್‌ಮೆಂಟ್ ರಿಸರ್ಚ್ ಇನ್ಸ್‌ಟಿಟ್ಯೂಟ್, (EMRI) ಸಿಕಂದರಾಬಾದ್, ಸಂಸ್ಥೆಗೆ ವಹಿಸಲಾಗಿದೆ.

ಆ) ಒಪ್ಪಂದದ ಪ್ರಕಾರ ಕಿಲೋ ಮೀಟರ್ ಆಧಾರದ ಮೇಲೆ ಈ ಯೋಜನೆ ರೂಪಿಸಿಲ್ಲ.

ಪರಿಶಿಷ್ಟ ಜಾತಿ/ಪಂಗಡ ವರ್ಗದವರಿಗೆ ಕೊಳವೆ ಬಾವಿ/ಏತ ನೀರಾವರಿ ಸೌಲಭ್ಯದ ಬಗ್ಗೆ

176 ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಚಿಕ್ಕೋಡಿ ಸದಲಗ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕೋಡಿ–ಸದಲಗಾ ಕ್ಷೇತ್ರದಲ್ಲಿ 2008–09 ಹಾಗೂ 2009–10ನೇ ಸಾಲಿನಲ್ಲಿ ಕ್ಷೇತ್ರಕ್ಕೆ ಒಟ್ಟು ಎಷ್ಟು ಪರಿಶಿಷ್ಟ ಜಾತಿ–ಪರಿಶಿಷ್ಟ ಪಂಗಡಗಳ ಫಲಾನುಭವಿಗಳಿಗೆ ಕೊಳವೆ ಬಾವಿಗಳು ಹಾಗೂ ಏತ ನೀರಾವರಿ ಸೌಲಭ್ಯವನ್ನು ಒದಗಿಸಲಾಗಿದೆ.

ಆ) ಹಾಗಿದ್ದಲ್ಲಿ, ಫಲಾನುಭವಿಗಳ ಆಯ್ಕೆ ಆಗಿದೆಯೇ; ಕೊರೆಸಲಾದ ಕೊಳವೆ ಬಾವಿಗಳ ವಿವರ ಹಾಗೂ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆಯೇ; ಕಲ್ಪಿಸಲಾಗದಿದ್ದಲ್ಲಿ ಅದಕ್ಕೆ ಕಾರಣಗಳೇನು; ವಿವರ ನೀಡುವುದು?